ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರವರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ / DATE: 20/02/2020

# ಸದನದಲ್ಲಿ ಮಂತ್ರಿಗಳಿಲ್ಲ ಪ್ರತಿಪಕ್ಷ ಆಕ್ಷೇಪ



**ವಿಧಾನಸಭೆ:** ಬುಧವಾರ ವಿಧಾನಸಭಾ ಕಾರ್ಯಕಲಾಪ ಆರಂಭವಾಗುತ್ತಿದ್ದಂತೆ ಸ್ಪೀಕರ್ ಕಾಗೇರಿ ಅವರು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಗೆ ನಿಯಮ 69 ರಲ್ಲಿ ಮಾತನಾಡಲು ಅವಕಾಶ ನೀಡಿದರು. ಆದರೆ ಈ ಹಂತದಲ್ಲಿ ಕೇವಲ ಕೆ.ಎಸ್. ಈಶ್ವರಪ್ಪ ಮಾತ್ರ ಸದನದಲ್ಲಿ ಇದ್ದದ್ದು ಪ್ರತಿಪಕ್ಷ ಶಾಸಕರ ಅಸಮಾಧಾನಕ್ಕೆ ಕಾರಣವಾಯಿತು.

ಈ ಬಗ್ಗೆ ಮೊದಲು ಪ್ರಸ್ತಾಪಿಸಿದ ಕಾಂಗ್ರೆಸ್ ಶಾಸಕ ಪರಮೇಶ್ವರ ನಾಯ್ಕ್, ಆಡಳಿತ ನಡೆಸುವ ಸಚಿವರೂ ಇಲ್ಲ, ಶಾಸಕರೂ ಸದನದಲ್ಲಿಲ್ಲ. ಕಾನೂನು ಸುವ್ಯವಸ್ಥೆ ಬಗ್ಗೆ ಮಾತನಾಡುವಾಗ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಸದನದಲ್ಲಿಲ್ಲ. ಹೀಗಿರುವಾಗ ಸದನದಲ್ಲಿ ಪ್ರತಿಪಕ್ಷ ನಾಯಕರು ಯಾರಿಗೆ ಮಾತನಾಡಬೇಕು ಎಂದು ಆಕ್ಷೇಪವ್ಯಕ್ತಪಡಿಸಿದರು.

ಈ ವೇಳೆ ಮಧ್ಯಪ್ರವೇಶಿಸಿದ ಸ್ಪೀಕರ್ ಕಾಗೇರಿ, ಸದನಕ್ಕೆ ಹಾಜರಾಗಬೇಕು ಎನ್ನುವ ಸ್ವಯಂ ಜವಾಬ್ದಾರಿ ಎಲ್ಲರಿಗೂ ಬರುವ ತನಕ ಯಾರೇನು ಮಾಡಲು ಆಗುವುದಿಲ್ಲ. ಸಮಯಕ್ಕೆ ಸರಿಯಾಗಿ ಹಾಜರಿರುವಂತೆ ಹೇಳಿದರೂ, ಈ ರೀತಿ ತಡವಾದರೆ ಏನು ಮಾಡಲು ಸಾಧ್ಯವಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಈ ವೇಳೆಗೆ ಸದನಕ್ಕೆ ಆಗಮಿಸಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಕೆಲಸವಿದ್ದ ಕಾರಣ ತಡವಾಯಿತು. ಕ್ಷಮೆಯಿರಲಿ ಎಂದು ತೆರೆ ಎಳೆದರು.